# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 522 |
| ಸದಸ್ಯರ ಹೆಸರು | : | ಶ್ರೀ ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 08.12.2023 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿನ ಜಿಲ್ಲೆಗಳ ಅಧ್ಯಯನಕ್ಕೆ ಡಾ: ಡಿ.ಎಂ ನಂಜುಂಡಪ್ಪರವರ ಅಧ್ಯಕ್ಷತೆಯಲ್ಲಿ ಯಾವ ವರ್ಷದಲ್ಲಿ ಸಮಿತಿಯನ್ನು ರಚಿಸಲಾಯಿತು ಮತ್ತು ಈ ಸಮಿತಿ ವರದಿಯನ್ನು ಸರ್ಕಾರಕ್ಕೆ ಯಾವಾಗ ಸಲ್ಲಿಸಿದೆ ಮತ್ತು ಈ ವರದಿಯ ಪ್ರಕಾರ ಯಾವ ಕಾಲಮಿತಿಯಲ್ಲಿ ಜಿಲ್ಲಾ ಅಸಮಾನತೆಯನ್ನು ಹೋಗಲಾಡಿಸಲು ಉದ್ದೇಶಿಸಲಾಗಿದೆ; (ಪೂರ್ಣ ಮಾಹಿತಿ ನೀಡುವುದು) | ಪ್ರಾದೇಶಿಕ ಅಸಮತೋಲವನ್ನು ಅಧ್ಯಯನ ಮಾಡಿ ಪರಿಹಾರಗಳ ಕ್ರಮವನ್ನು ಕೈಗೊಳ್ಳುವ ಬಗ್ಗೆ ದಿನಾಂಕ:18.11.1999ರ ಸಚಿವ ಸಂಪುಟದ ನಿರ್ಣಯದಂತೆ, ದಿನಾಂಕ:10.04.2000 ರಂದು ಡಾ॥ ಡಿ.ಎಂ.ನಂಜುಂಡಪ್ಪ ರವರ ಸಮಿತಿಯನ್ನು ರಚಿಸಲಾಯಿತು.<br><br>ಡಾ॥ ಡಿ.ಎಂ.ನಂಜುಂಡಪ್ಪರವರ ಸಮಿತಿಯು 25ನೇ ಜೂನ್ 2002ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿತು.<br><br>ಡಾ॥ ಡಿ.ಎಂ.ನಂಜುಂಡಪ್ಪ ವರದಿಯ ಶಿಫಾರಸ್ಸಿನ ಅನ್ವಯ ಎಂಟು ವರ್ಷಗಳಿಗೆ ಅಂದರೆ 2014-15ರ ಅವಧಿಗೆ ಪ್ರಾದೇಶಿಕ ಅಸಮತೋಲನವನ್ನು ಹೊಗಲಾಡಿಸಲು ಉದ್ದೇಶಿಸಲಾಗಿತ್ತು. ಆದರೆ, ಪ್ರಾದೇಶಿಕ ಅಸಮತೋಲನೆ ನಿವಾರಣೆಯಾಗದ ಕಾರಣ 2015-16 ರಿಂದ 2019-20ರವರೆಗೆ ಪ್ರತಿ ವರ್ಷ ರೂ. 3000.00 ಕೋಟಿಗಳನ್ನು ನೀಡಿ ದಿನಾಂಕ:15.07.2015ರಂದು ಬೆಳಗಾವಿ ಅಧಿವೇಶನದಲ್ಲಿ ನಿರ್ಣಯ ಕೈಗೊಳ್ಳಲಾಗಿತ್ತು.<br><br>ತದನಂತರ ಪ್ರತಿ ವರ್ಷ ಅನುದಾನ ನಿಗದಿಪಡಿಸಿ, ಯೋಜನೆಯನ್ನು ಮುಂದುವರೆಸಲಾಗಿದೆ. 2023-24ನೇ ಸಾಲಿನಲ್ಲಿ ಮಹತ್ವಾಕಾಂಕ್ಷಿ ತಾಲ್ಲೂಕುಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ರೂ.3046.18 ಕೋಟಿಗಳನ್ನು ನಿಗದಿಪಡಿಸಲಾಗಿರುತ್ತದೆ. |
| (ಆ) | ರಾಜ್ಯದಲ್ಲಿ ಈ ಸಮಿತಿಯ ವರದಿ ಪ್ರಕಾರ ಹಿಂದುಳಿದಿರುವ ಜಿಲ್ಲೆಗಳು ಹಾಗೂ ತಾಲ್ಲೂಕುಗಳು ಎಷ್ಟು; (ಪೂರ್ಣ ವಿವರ ನೀಡುವುದು) | ಡಾ॥ ಡಿ.ಎಂ ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ ಜಿಲ್ಲೆಗಳು-18 ಹಾಗೂ ತಾಲ್ಲೂಕುಗಳು 114, 114 ತಾಲ್ಲೂಕುಗಳ ಪೈಕಿ 35 ತಾಲ್ಲೂಕುಗಳನ್ನು ಹಿಂದುಳಿದ ತಾಲ್ಲೂಕುಗಳೆಂದು, 39 ಅತ್ಯಂತ ಹಿಂದುಳಿದ ತಾಲ್ಲೂಕುಗಳೆಂದು ಹಾಗೂ 40 ಅತೀ ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಲಾಗಿದೆ. |

| | | |
|---|---|---|
| (ಇ) | ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಈ ವರದಿ ಪ್ರಕಾರ ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಿರುವ ತಾಲ್ಲೂಕುಗಳ ಅಭಿವೃದ್ಧಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು) | ಕಳೆದ 3 ವರ್ಷಗಳ ಅವಧಿಯಲ್ಲಿ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಖರ್ಚುಮಾಡಿದ ಅನುದಾನದ ವಿವರಗಳ ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ–1** ರಲ್ಲಿ ನೀಡಲಾಗಿದೆ. |
| (ಈ) | ರಾಜ್ಯದಲ್ಲಿ ಕಳೆದ ದಶಕಗಳಲ್ಲಿ ರಚಿತವಾಗಿರುವ 11 ಜಿಲ್ಲೆಗಳಲ್ಲಿ ಡಾ: ನಂಜುಂಡಪ್ಪ ಸಮಿತಿ ಮಾಡಿರುವ ಶಿಫಾರಸ್ಸುಗಳು ಅನುಷ್ಠಾನವಾಗದೇ, ಪ್ರಾದೇಶಿಕ ಅಸಮಾನತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಅಸಮಾನತೆಯನ್ನು ತೊಡೆದು ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಡಾ॥ ಡಿ.ಎಂ ನಂಜುಂಡಪ್ಪ ವರದಿಯ ಶಿಫಾರಸ್ಸುಗಳು ಅನುಷ್ಠಾನವಾಗದೇ ಪ್ರಾದೇಶಿಕ ಅಸಮಾನತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಸರ್ಕಾರವು ನಿರಂತರವಾಗಿ ತಾಲ್ಲೂಕುಗಳ ಅಭಿವೃದ್ಧಿಗೆ ವಿವಿಧ ಇಲಾಖೆಗಳ ಮೂಲಕ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| (ಉ) | ಸರ್ಕಾರವು ಡಾ: ನಂಜುಂಡಪ್ಪ ಸಮಿತಿಯ ವರದಿಯನ್ನು ಯಥಾವತ್ ಆಗಿ ಅನುಷ್ಠಾನಗೊಳಿಸುವ ಬದಲು ಈ ವರದಿಯನ್ನು ಕೈಬಿಟ್ಟು, ಕೇಂದ್ರ ಸರ್ಕಾರದ ನೀತಿ ಆಯೋಗದ 49 ಸೂಚಕಗಳನ್ನು ಆಧರಿಸಿ, ಮಹತ್ವಕಾಂಕ್ಷಿ ತಾಲ್ಲೂಕುಗಳಾಗಿ ಪರಿವರ್ತಿಸಲು ನಿರ್ಧರಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಯೋಜನೆಯಡಿ ಹಿಂದುಳಿದ ತಾಲ್ಲೂಕುಗಳಿಗೆ ಇದುವರೆವಿಗೂ ದೊರೆತಿರುವ ಕೇಂದ್ರ ಸರ್ಕಾರದ ಆರ್ಥಿಕ ನೆರವು ಎಷ್ಟು? (ಪೂರ್ಣ ಮಾಹಿತಿ ನೀಡುವುದು) | ಡಾ॥ ಡಿ.ಎಂ. ನಂಜುಂಡಪ್ಪ ವರದಿಯ ಬದಲು ಕೇಂದ್ರ ಸರ್ಕಾರದ ನೀತಿ ಆಯೋಗದ 49 ಸೂಚ್ಯಾಂಕಗಳನ್ನು ಆಧಾರಿಸಿ ಮಹತ್ವಾಕಾಂಕ್ಷಿ ತಾಲ್ಲೂಕುಗಳ ಯೋಜನೆ ರೂಪಿಸಿ ಸಚಿವ ಸಂಪುಟದ ಅನುಮೋದನೆಗೆ ಸಲ್ಲಿಸಲಾಯಿತು. ಹಿಂದಿನ ಸರ್ಕಾರದ ಸಚಿವ ಸಂಪುಟವು ಸದರಿ ಟಿಪ್ಪಣಿಗೆ ಅನುಮೋದನೆ ನೀಡಿರುವುದಿಲ್ಲ. ಆದರೆ, 2022–23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ –88ರಲ್ಲಿ ಮಹತ್ವಾಕಾಂಕ್ಷಿ ತಾಲ್ಲೂಕುಗಳ ಅಭಿವೃದ್ಧಿ ಯೋಜನೆಯಡಿ ರಾಜ್ಯದ ಸರಾಸರಿಗಿಂತ ಕಡಿಮೆ ಸಾಧನೆ ಮಾಡಿರುವ ತಾಲ್ಲೂಕುಗಳನ್ನು 'ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕು'ಗಳೆಂದು ಘೋಷಿಸಿ 93 ತಾಲ್ಲೂಕುಗಳಲ್ಲಿ ಶಿಕ್ಷಣ ಗುಣಮಟ್ಟ ವೃದ್ಧಿಸಲು, 100 ತಾಲ್ಲೂಕುಗಳು ಆರೋಗ್ಯ ಸೇವೆ ಬಲಪಡಿಸಲು ಹಾಗೂ 102 ತಾಲ್ಲೂಕುಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಪೌಷ್ಠಿಕತೆ ನಿವಾರಿಸಲು ಫಲಿತಾಂಶ ಕೇಂದ್ರಿಕೃತ ಪ್ರಯತ್ನ ಮಾಡಲಾಗುವುದೆಂದು ಘೋಷಿಸಿರುತ್ತಾರೆ.<br><br>ಈ ಯೋಜನೆಗೆ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಇದೂವರೆವಿಗೂ ಕೇಂದ್ರ ಸರ್ಕಾರದ ಯಾವುದೇ ಆರ್ಥಿಕ ನೆರವು ನೀಡಿರುವುದಿಲ್ಲ. |

**ಪಿಡಿಎಸ್ 35 ಎಸ್‌ಡಿಪಿ 2023**

(ಡಿ. ಸುಧಾಕರ್)
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.